# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 341
ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ. ಕೆ.ಎ.ತಿಪ್ಪೇಸ್ವಾಮಿ (ನಾಮ ನಿರ್ದೇಶನ ಹೊಂದಿದವರು)
ಉತ್ತರಿಸುವವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರು
ಉತ್ತರಿಸಬೇಕಾದ ದಿನಾಂಕ : 07.07.2023

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕೇಂದ್ರ ಪುರಸ್ಕೃತ ಮಹಿಳಾ ಶಕ್ತಿ ಕೇಂದ್ರಗಳ ಯೋಜನೆಯನ್ನು (MSK) ಯಾವ ಜಿಲ್ಲೆಗಳಲ್ಲಿ ಜಾರಿಗೊಳಿಸಲಾಗುತ್ತಿದೆ; | ಕೇಂದ್ರ ಪುರಸ್ಕೃತ ಮಹಿಳಾ ಶಕ್ತಿ ಕೇಂದ್ರ ಯೋಜನೆಯನ್ನು ರಾಜ್ಯದ 28 ಜಿಲ್ಲೆಗಳಲ್ಲಿ ಹಂತ ಹಂತವಾಗಿ ಜಾರಿಗೊಳಿಸಲಾಗಿದೆ.<br><br>2018-19ನೇ ಸಾಲಿನಲ್ಲಿ ಕಲಬುರಗಿ, ವಿಜಯಪುರ, ರಾಯಚೂರು, ಯಾದಗಿರಿ, ಗದಗ, ಬಾಗಲಕೋಟೆ, ದಕ್ಷಿಣಕನ್ನಡ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗಿತ್ತು.<br><br>2019-20ನೇ ಸಾಲಿನಲ್ಲಿ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ, ಚಿತ್ರದುರ್ಗ, ದಾವಣಗೆರೆ, ಕೋಲಾರ, ಶಿವಮೊಗ್ಗ, ತುಮಕೂರು, ಚಿಕ್ಕಮಗಳೂರು, ಉಡುಪಿ, ಹಾಸನ, ಕೊಡಗು, ಮಂಡ್ಯ, ಮೈಸೂರು, ಉತ್ತರ ಕನ್ನಡ, ಬೆಳಗಾವಿ, ಧಾರವಾಡ, ಬಳ್ಳಾರಿ, ಬೀದರ್ ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗಿತ್ತು.<br><br>ಚಾಮರಾಜನಗರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಅನುಷ್ಠಾನಗೊಂಡಿರುವುದಿಲ್ಲ. |
| ಆ) | ಈ ಯೋಜನೆಯ ಧ್ಯೆಯೋದ್ದೇಶಗಳು ಯಾವುವು; ಮತ್ತು ಈ ಯೋಜನೆ ಅಡಿ ಅನುಷ್ಠಾನಗೊಳಿಸುತ್ತಿರುವ ಕಾರ್ಯಕ್ರಮಗಳು ಯಾವುವು; (ಪೂರ್ಣ ಮಾಹಿತಿ ನೀಡುವುದು) | • ಪ್ರಧಾನ ಮಂತ್ರಿ ಮಹಿಳಾ ಸಶಕ್ತೀಕರಣ (PMMSY) ಯೋಜನೆಯಡಿ ಕೌಶಲ್ಯಾಭಿವೃದ್ಧಿ, ಉದ್ಯೋಗ, ಡಿಜಿಟಲ್ ಸಾಕ್ಷರತೆ, ಆರೋಗ್ಯ ಮತ್ತು ಪೌಷ್ಠಿಕತೆಗಳ ಮೂಲಕ ಗ್ರಾಮೀಣ ಮಹಿಳೆಯರನ್ನು ಸಬಲೀಕರಣಗೊಳಿಸಲು ಒಂದೇ ಕಡೆ ಎಲ್ಲಾ ಸಹಾಯ ಸೇವೆಗಳನ್ನು ನೀಡುವುದಾಗಿತ್ತು.<br><br>• ಯಾವುದೇ ಹಸ್ತಕ್ಷೇಪವಿಲ್ಲದೆ ಗ್ರಾಮೀಣ ಮಹಿಳೆಯರಿಗೆ ಜಾಗೃತಿ ಮೂಡಿಸುವ ಮೂಲಕ ತರಬೇತಿ ಮತ್ತು ಸಾಮರ್ಥ್ಯದ ಅಭಿವೃದ್ಧಿ, ಸರ್ಕಾರದ ಸೇವೆ ಹಾಗೂ ಯೋಜನೆಗಳನ್ನು ಪಡೆಯುವಂತೆ ಮಾಡುವುದು.<br><br>• ರಾಜ್ಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಸರ್ಕಾರದ ಯೋಜನೆಗಳು/ಕಾರ್ಯಕ್ರಮಗಳ ಲಭ್ಯತೆಯನ್ನು ನೋಡುವುದು. |

| | | |
|---|---|---|
| ಇ) | ರಾಜ್ಯ ಸರ್ಕಾರಕ್ಕೆ ಈ ಯೋಜನೆ ಅಡಿ ಕೇಂದ್ರ ಸರ್ಕಾರದಿಂದ ದೊರೆತಿರುವ ಆರ್ಥಿಕ ನೆರವು ಮತ್ತು ಬೆಂಬಲಗಳು ಯಾವುವು? (ಪೂರ್ಣ ಮಾಹಿತಿ ನೀಡುವುದು) | ಈ ಯೋಜನೆಯ ಅನುಷ್ಠಾನಕ್ಕಾಗಿ ಕೇಂದ್ರ ಸರ್ಕಾರದಿಂದ ರೂ.6,33,19,233/-ಗಳ ಅನುದಾನ ಸ್ವೀಕೃತವಾಗಿದೆ.<br><br>2021-2022ನೇ ಸಾಲಿಗೆ ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ.<br><br>ಮಹಿಳಾ ಶಕ್ತಿ ಕೇಂದ್ರ ಯೋಜನೆಯನ್ನು ಮಾರ್ಚ್ 2022 ರಿಂದ ಸ್ಥಗಿತಗೊಳಿಸಲಾಗಿದೆ. |

ಸಂಖ್ಯೆ: ಮಮಇ /43/ಮಅನಿ/2023

(ಲಕ್ಷ್ಮೀ ಆರ್. ಹೆಬ್ಬಾಳಕರ್)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರೀಕರ
ಸಬಲೀಕರಣ ಸಚಿವರು.